# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1032 (1246)

2) ಸದಸ್ಯರ ಹೆಸರು : ಶ್ರೀ ಎಸ್. ರವಿ
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

3) ಉತ್ತರಿಸುವ ದಿನಾಂಕ : 15-03-2021

4) ಉತ್ತರಿಸುವವರು : ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೇಂದ್ರ ಸರ್ಕಾರದ ಅರಣ್ಯ, ಪರಿಸರ, ಜೀವಿಶಾಸ್ತ್ರ ಸಚಿವಾಲಯವು ರಾಮನಗರ ಜಿಲ್ಲಾ ವ್ಯಾಪ್ತಿಯಲ್ಲಿ ಕಾವೇರಿ ವನ್ಯಜೀವಿಗಳ ಪರಿಸರ ಸೂಕ್ಷ್ಮ ವಲಯ / ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನ ಪರಿಸರ ಸೂಕ್ಷ್ಮ ವಲಯ / ಶ್ರೀರಾಮ ದೇವರಬೆಟ್ಟ ರಣಹದ್ದುಗಳ ಪರಿಸರ ಸೂಕ್ಷ್ಮ ವಲಯ ಎಂದು ಘೋಷಿಸಿ ಅಧಿಸೂಚನೆ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br>ಭಾರತ ಸರ್ಕಾರವು ಗೆಜೆಟ್ ನೋಟಿಫಿಕೇಷನ್ ಸಂಖ್ಯೆ: SO2993(E), dated: 11.09.2017 ಮತ್ತು SO1036(E), dated: 11.03.2020ರಲ್ಲಿ ಕ್ರಮವಾಗಿ ಶ್ರೀ ರಾಮ ದೇವರಬೆಟ್ಟ ರಣಹದ್ದು ವನ್ಯಧಾಮ ಮತ್ತು ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನದ ಸುತ್ತಲಿನ ಪ್ರದೇಶವನ್ನು ಪರಿಸರ ಸೂಕ್ಷ್ಮ ವಲಯವೆಂದು ಅಂತಿಮ ಅಧಿಸೂಚನೆಗೊಳಿಸಿರುತ್ತದೆ. |
| ಆ) | ಬಂದಿದ್ದಲ್ಲಿ, ಅಧಿಸೂಚನೆಯಂತೆ ಪರಿಸರ ಸೂಕ್ಷ್ಮ ವಲಯ ವ್ಯಾಪ್ತಿಯೊಳಗೆ ಬರುವ ಗ್ರಾಮಗಳು / ಪರಿಸರ ಸೂಕ್ಷ್ಮ ವಲಯ ವ್ಯಾಪ್ತಿಯಿಂದ 01 ಕಿಲೋಮೀಟರ್ ವ್ಯಾಪ್ತಿಯೊಳಗೆ ಬರುವ ಗ್ರಾಮಗಳಿಗೆ ಭೌತಿಕವಾಗಿ ಗಡಿ ಗುರುತಿಸಲಾಗಿದೆಯೇ; | ಪರಿಸರ ಸೂಕ್ಷ್ಮ ವಲಯ ವ್ಯಾಪ್ತಿಯೊಳಗೆ ಬರುವ ಗ್ರಾಮಗಳು / ಪರಿಸರ ಸೂಕ್ಷ್ಮ ವಲಯ ವ್ಯಾಪ್ತಿಯಿಂದ ಒಂದು ಕಿ.ಮೀ. ವ್ಯಾಪ್ತಿಯೊಳಗೆ ಬರುವ ಗ್ರಾಮಗಳಿಗೆ ಭೌತಿಕವಾಗಿ ಗಡಿ ಗುರುತಿಸುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |
| ಇ) | ಗುರುತಿಸಲಾಗಿದ್ದರೆ, ಸಂಬಂಧಪಟ್ಟ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಸಾರ್ವಜನಿಕರಿಗೆ ಅವರ ಜಮೀನು ಪರಿಸರ ಸೂಕ್ಷ್ಮ ವಲಯ ವ್ಯಾಪ್ತಿಯೊಳಗೆ ಬರುತ್ತವೆಯೇ ಅಥವಾ ಇಲ್ಲವೇ ಎಂಬ ಬಗ್ಗೆ ನಿಖರವಾದ ಮಾಹಿತಿ ನೀಡುವಲ್ಲಿ ವಿಳಂಬ ಧೋರಣೆ ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪ್ರಸ್ತುತ ಸ್ವೀಕೃತವಾಗುವ ಜಮೀನು / ಯೋಜನಾ ಪ್ರದೇಶಗಳ ಪ್ರಸ್ತಾವನೆಗಳನ್ನು ಜಿ.ಪಿ.ಎಸ್. ತಂತ್ರಾಂಶದ ಸಹಾಯದಿಂದ ಪರಿಶೀಲಿಸಿ, ಪರಿಸರ ಸೂಕ್ಷ್ಮ ವಲಯ ವ್ಯಾಪ್ತಿಗೆ ಬರುವುದೇ ಅಥವಾ ಇಲ್ಲವೇ ಎಂಬ ಬಗ್ಗೆ ವರದಿ ನೀಡಲಾಗುತ್ತಿದೆ.<br><br>ಮೇಲೆ ವಿವರಿಸಿದ ಕಾರಣಗಳಿಂದಾಗಿ ವಿಳಂಬದ ಪ್ರಶ್ನೆ ಉದ್ಭವಿಸುವುದಿಲ್ಲ. |

| | | |
|---|---|---|
| ಈ) | ಪರಿಸರ ಸೂಕ್ಷ್ಮ ವಲಯ ವ್ಯಾಪ್ತಿಯೊಳಗೆ ಅಭಿವೃದ್ಧಿ ಚಟುವಟಿಕೆಗಳಿಗೆ ಅನುಮತಿ ನೀಡಲು ಪ್ರಾದೇಶಿಕ ಆಯುಕ್ತರ ಅಧ್ಯಕ್ಷತೆಯಲ್ಲಿ ನಿರ್ವಹಣಾ ಸಮಿತಿ ರಚಿಸಿದ್ದು, ಸಂಬಂಧಪಟ್ಟ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಸಮಿತಿಯ ಸದಸ್ಯ ಕಾರ್ಯದರ್ಶಿಗಳಾಗಿದ್ದು, ಅದರಂತೆ ಈವರೆವಿಗೆ ಎಷ್ಟು ಸಮಿತಿ ಸಭೆ ನಡೆಸಲಾಗಿದೆ; ಎಷ್ಟು ಅಭಿವೃದ್ಧಿ ಚಟುವಟಿಕೆಗಳಿಗೆ ಅನುಮತಿ ನೀಡಲಾಗಿದೆ? | ಶ್ರೀ ರಾಮ ದೇವರಬೆಟ್ಟ ರಣಹದ್ದು ವನ್ಯಧಾಮದ ಪರಿಸರ ಸೂಕ್ಷ್ಮ ವಲಯ ವ್ಯಾಪ್ತಿಗೆ ಸಂಬಂಧಿಸಿದಂತೆ ಈವರೆವಿಗೆ ಒಟ್ಟು 3 ನಿರ್ವಹಣಾ ಸಮಿತಿ ಸಭೆಗಳು ಜರುಗಿರುತ್ತವೆ. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರಕ್ಕೆ ಬೆಂಗಳೂರು – ಮೈಸೂರು ರಾಷ್ಟ್ರೀಯ ಹೆದ್ದಾರಿ-275 ಯನ್ನು ಅಭಿವೃದ್ಧಿ ಪಡಿಸಲು ಅನುಮತಿ ನೀಡಲಾಗಿದೆ.<br><br>ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನದ ಪರಿಸರ ಸೂಕ್ಷ್ಮ ವಲಯ ವ್ಯಾಪ್ತಿಗೆ ಸಂಬಂಧಿಸಿದಂತೆ ಈವರೆವಿಗೆ ಒಟ್ಟು 3 ನಿರ್ವಹಣಾ ಸಮಿತಿ ಸಭೆಗಳು ಜರುಗಿರುತ್ತವೆ. ಸದರಿ ಸಭೆಗಳಲ್ಲಿ ಒಟ್ಟು 35 ಅಭಿವೃದ್ಧಿ ಚಟುವಟಿಕೆಗಳ ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ. |

ಸಂಖ್ಯೆ: ಅಪಜೀ 41 ಎಫ್‌ಡಬ್ಲ್ಯೂಎಲ್ 2021

(ಅರವಿಂದ ಲಿಂಬಾವಳಿ)
ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಸಚಿವರು